# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 494
**ಸದಸ್ಯರ ಹೆಸರು** : ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
**ಉತ್ತರಿಸಬೇಕಾದ ದಿನಾಂಕ** : 30.01.2026.

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸ್ವಂತ ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಇವುಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಪ್ರಸಕ್ತ ಆಯವ್ಯಯದಲ್ಲಿ ಮೀಸಲಿಟ್ಟ ಅನುದಾನವೆಷ್ಟು;</td><td>ಮೈಸೂರು ಜಿಲ್ಲೆಯಲ್ಲಿ ಸ್ವಂತ ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡದಲ್ಲಿ ಒಟ್ಟು 264 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಈ ಪೈಕಿ 13 ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಪ್ರಸಕ್ತ ಸಾಲಿನಲ್ಲಿ ಒಟ್ಟು ರೂ.260.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br><br>ಚಾಮರಾಜನಗರ ಜಿಲ್ಲೆಯಲ್ಲಿ ಸ್ವಂತ ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡದಲ್ಲಿ ಒಟ್ಟು 230 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತುವೆ. ಈ ಪೈಕಿ 10 ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಪ್ರಸಕ್ತ ಸಾಲಿನಲ್ಲಿ ಒಟ್ಟು ರೂ.200.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.</td></tr>
<tr><td>ಆ)</td><td>ಹಳೆಯದಾಗಿರುವ ಮತ್ತು ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕಟ್ಟಡಗಳ ದುರಸ್ತಿಗೆ ಸರ್ಕಾರವು ಕಳೆದ ವರ್ಷಗಳಲ್ಲಿ ಬಿಡುಗಡೆ ಮಾಡಿದ ಹಣ ಎಷ್ಟು; ದುರಸ್ತಿ ಕಾರ್ಯ ಪೂರ್ಣಗೊಂಡಿರುವ ಕಟ್ಟಡಗಳ ಸಂಖ್ಯೆ ಎಷ್ಟು?</td><td>ಕಳೆದ 03 ವರ್ಷಗಳಲ್ಲಿ ಮೈಸೂರು ಜಿಲ್ಲೆಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕಟ್ಟಡಗಳನ್ನು ದುರಸ್ತಿ ಮಾಡಲು ಬಿಡುಗಡೆಯಾದ ಅನುದಾನದ ವಿವರ ಈ ಕೆಳಗಿನಂತಿದೆ.<br><br>(ರೂ. ಲಕ್ಷಗಳಲ್ಲಿ)
<table>
<tr><th>ಕ್ರ. ಸಂ.</th><th>ವರ್ಷ</th><th>ಮಂಜೂರಾದ ಅಂಗನವಾಡಿ ಕಟ್ಟಡಗಳ ಸಂಖ್ಯೆ</th><th>ಬಿಡುಗಡೆಯಾದ ಅನುದಾನ</th></tr>
<tr><td>1</td><td>2022-23</td><td>325</td><td>175.00</td></tr>
<tr><td>2</td><td>2023-24</td><td>358</td><td>200.00</td></tr>
<tr><td>3</td><td>2024-25</td><td>378</td><td>224.00</td></tr>
<tr><td colspan="2">ಒಟ್ಟು</td><td>1061</td><td>599.00</td></tr>
</table>
<br>ಕಳೆದ 03 ವರ್ಷಗಳಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕಟ್ಟಡಗಳನ್ನು ದುರಸ್ತಿ ಮಾಡಲು ಬಿಡುಗಡೆಯಾದ ಅನುದಾನದ ವಿವರ ಈ ಕೆಳಗಿನಂತಿದೆ.<br><br>(ರೂ. ಲಕ್ಷಗಳಲ್ಲಿ)
<table>
<tr><th>ಕ್ರ. ಸಂ.</th><th>ವರ್ಷ</th><th>ಮಂಜೂರಾದ ಅಂಗನವಾಡಿ ಕಟ್ಟಡಗಳ ಸಂಖ್ಯೆ</th><th>ಬಿಡುಗಡೆಯಾದ ಅನುದಾನ</th></tr>
<tr><td>1</td><td>2022-23</td><td>225</td><td>125.00</td></tr>
<tr><td>2</td><td>2023-24</td><td>147</td><td>125.00</td></tr>
<tr><td>3</td><td>2024-25</td><td>221</td><td>208.00</td></tr>
<tr><td colspan="2">ಒಟ್ಟು</td><td>593</td><td>458.00</td></tr>
</table>
</td></tr>
</table>

**ಸಂಖ್ಯೆ: ಮಮಇ 43 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು